**All India Radio: Bangalore**
**National Bulletins In Kannada**
**04.06.2025 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

೧. ಐಪಿಎಲ್ ಟಿ-೨೦ ಕ್ರಿಕೆಟ್; ೧೮ನೇ ಆವೃತ್ತಿಯ ಪ್ರಶಸ್ತಿ ಮುಡಿಗೇರಿಸಿಕೊಂಡ ರಾಯಲ್ ಚಾಲೆಂಜರ್ಸ್ ಬೆಂಗಳೂರು; ಎಲ್ಲೆಡೆ ಸಂಭ್ರಮ

೨. ಮೊದಲ ಬಾರಿಗೆ ಪ್ರಶಸ್ತಿ ಗೆದ್ದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ಗಣ್ಯರ ಶುಭಾಶಯ

೩. ಪ್ರವಾಹಪೀಡಿತ ಸಿಕ್ಕಿಂನ ಲಾಚೆನ್ ಮತ್ತು ಚಾಟೆನ್ ನಲ್ಲಿ ಸ್ಥಳಾಂತರಿಸುವ ಪ್ರಕ್ರಿಯೆ ಇಂದು ಪುನರಾರಂಭ

೪. ಇಂದಿನಿಂದ ಐದು ದಿನಗಳ ವಾರ್ಷಿಕ ಹಜ್ ಯಾತ್ರೆ ಆರಂಭ

**<><*<><>*><>**

ಇಂಡಿಯನ್ ಪ್ರೀಮಿಯರ್ ಲೀಗ್ - ಐಪಿಎಲ್ ಟಿ-೨೦ ಕ್ರಿಕೆಟ್‌ನ ೧೮ ನೇ ಆವೃತ್ತಿಯ ಪ್ರಶಸ್ತಿಯನ್ನು ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಮುಡಿಗೇರಿಸಿಕೊಂಡಿದೆ. ನಿನ್ನೆ ರಾತ್ರಿ ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆದ ಫೈನಲ್ ಪಂದ್ಯದಲ್ಲಿ ಆರ್‌ಸಿಬಿ, ಪಂಜಾಬ್ ಕಿಂಗ್ಸ್ ತಂಡವನ್ನು ೬ ರನ್‌ಗಳಿಂದ ಸೋಲಿಸಿ ಪ್ರಶಸ್ತಿ ಗೆದ್ದ ನಂತರ, ಆರ್‌ಸಿಬಿ ನಾಯಕ ರಜತ್ ಪಾಟಿದಾರ್, ವಿರಾಟ್ ಕೊಹ್ಲಿ ಮತ್ತು ಎಲ್ಲಾ ಅಭಿಮಾನಿಗಳು ಈ ಗೆಲುವಿಗೆ ಹೆಚ್ಚು ಅರ್ಹರು ಎಂದು ಹೇಳಿದರು. ಪ್ರತಿಯೊಬ್ಬ ಆಟಗಾರನನ್ನು ಬೆಂಬಲಿಸಿದ್ದಕ್ಕಾಗಿ, ತಂಡದ ನಿರ್ವಹಣೆ ಮತ್ತು ತರಬೇತಿ ಸಿಬ್ಬಂದಿಗೆ ಅವರು ಧನ್ಯವಾದ ಅರ್ಪಿಸಿದರು. ಮೊದಲು ಬ್ಯಾಟಿಂಗ್ ಮಾಡಿದ ಆರ್‌ಸಿಬಿ, ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್‌ಗಳಿಗೆ ೧೯೦ ರನ್ ಗಳಿಸಿತು. ವಿರಾಟ್ ಕೊಹ್ಲಿ ಗರಿಷ್ಠ ೪೩ ರನ್ ಗಳಿಸಿದರೆ, ನಾಯಕ ಪಾಟಿದಾರ್ ೨೬ ರನ್ ಗಳಿಸಿದರು. ಪಂಜಾಬ್ ಕಿಂಗ್ಸ್ ಪರ ಅರ್ಶ್‌ದೀಪ್ ಸಿಂಗ್ ಮತ್ತು ಕೈಲ್ ಜೇಮಿಸನ್ ತಲಾ ೩ ವಿಕೆಟ್ ಪಡೆದರು. ೧೯೧ ರನ್‌ಗಳ ಗುರಿ ಬೆನ್ನತ್ತಿದ ಪಂಜಾಬ್ ಕಿಂಗ್ಸ್, ನಿಗದಿತ ೨೦ ಓವರ್‌ಗಳಲ್ಲಿ ೧೮೪ ರನ್ ಗಳಿಸಲಷ್ಟೇ ಶಕ್ತವಾಯಿತು. ಶಶಾಂಕ್ ಸಿಂಗ್ ಅಜೇಯ ೬೧ ರನ್ ಗಳಿಸಿದರು. ಅಸಾಧಾರಣ ಬೌಲಿಂಗ್‌ಗಾಗಿ, ಪಾಂಡ್ಯ ಪಂದ್ಯಶ್ರೇಷ್ಠ ಪ್ರಶಸ್ತಿಯನ್ನು ಪಡೆದರು. ಪಂದ್ಯದ ನಂತರದ ಪ್ರಸ್ತುತಿಯಲ್ಲಿ, ಗುಜರಾತ್ ಟೈಟಾನ್ಸ್‌ನ ಸಾಯಿ ಸುದರ್ಶನ್ ಅತಿ ಹೆಚ್ಚು ರನ್ ಗಳಿಸಿದ್ದಕ್ಕಾಗಿ ಆರೆಂಜ್ ಕ್ಯಾಪ್ ಪ್ರಶಸ್ತಿಯನ್ನು ಪಡೆದರೆ. ಅದೇ ತಂಡದ ಸಹ ಆಟಗಾರ ಪ್ರಸಿದ್ಧ್ ಕೃಷ್ಣ ಈ ಋತುವಿನಲ್ಲಿ ಅತಿ ಹೆಚ್ಚು ವಿಕೆಟ್‌ಗಳನ್ನು ಪಡೆದಿದ್ದಕ್ಕಾಗಿ ಪರ್ಪಲ್ ಕ್ಯಾಪ್ ಪ್ರಶಸ್ತಿಯನ್ನು ಪಡೆದರು. ಮುಂಬೈ ಇಂಡಿಯನ್ಸ್‌ನ ಸೂರ್ಯ ಕುಮಾರ್ ಯಾದವ್ ಪಂದ್ಯಾವಳಿಯಾದ್ಯಂತ ತಮ್ಮ ಅಸಾಧಾರಣ ಬ್ಯಾಟಿಂಗ್‌ಗಾಗಿ ಅತ್ಯಂತ ಮೌಲ್ಯಯುತ ಆಟಗಾರ ಎಂಬ ಪ್ರಶಸ್ತಿಯನ್ನು ಪಡೆದರು.

<><*<><>*><>

೧೮ ವರ್ಷಗಳ ನಂತರ ವಿರಾಟ್ ಕೊಹ್ಲಿ ಅಂತಿಮವಾಗಿ ಇಂಡಿಯನ್ ಪ್ರೀಮಿಯರ್ ಲೀಗ್ ಟ್ರೋಫಿಯನ್ನು ಎತ್ತಿ ಹಿಡಿದರು. ಫೈನಲ್‌ನಲ್ಲಿ ೩೫ ಎಸೆತಗಳಲ್ಲಿ ೪೩ ರನ್ ಗಳಿಸಿದ ಕೊಹ್ಲಿ, ಸುಮಾರು ಎರಡು ದಶಕಗಳಿಂದ ಬೆನ್ನಟ್ಟಿದ ಕ್ಷಣ ಅಂತಿಮವಾಗಿ ವಾಸ್ತವವಾದಾಗ ಭಾವುಕರಾದರು "ಈ ಗೆಲುವು ತಂಡಕ್ಕೆ ಎಷ್ಟು ಮುಖ್ಯವೋ, ಅಭಿಮಾನಿಗಳಿಗೂ ಅಷ್ಟೇ ಮುಖ್ಯ. ಪ್ರಾಮಾಣಿಕವಾಗಿ ಹೇಳಬೇಕೆಂದರೆ, ಈ ದಿನ ಬರುತ್ತದೆ ಎಂದು ಭಾವಿಸಿರಲಿಲ್ಲ ಎಂದು ಗೆದ್ದು ಭಾವುಕರಾಗಿದ್ದ ವಿರಾಟ್ ಕೊಹ್ಲಿ ಪಂದ್ಯದ ನಂತರದ ಸಂದರ್ಶನದಲ್ಲಿ ತಿಳಿಸಿದ್ದಾರೆ. ಆರ್‌ಸಿಬಿ ಗೆಲುವಿನ ಸಂಭ್ರಮದಲ್ಲಿ ಕರ್ನಾಟಕ, ವಿಶೇಷವಾಗಿ ರಾಜಧಾನಿ ಬೆಂಗಳೂರು, ನಿನ್ನೆ ರಾತ್ರಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಜಯಗಳಿಸಿದ ನಂತರ ಸಂತೋಷದಿಂದ ತುಂಬಿ ತುಳುಕುತ್ತಿತ್ತು. ಅಭಿಮಾನಿಗಳು ಇಂದು ಬೆಳಗಿನ ಜಾವದವರೆಗೆ ಪಟಾಕಿ ಸಿಡಿಸಿ ಬೀದಿಗಳಲ್ಲಿ ಜಮಾಯಿಸಿ ಸಂಭ್ರಮಿಸಿದರು. ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ, ಆರ್‌ಸಿಬಿಯನ್ನು ಶ್ಲಾಘಿಸುತ್ತಾ, "ಐಪಿಎಲ್ ಐತಿಹಾಸಿಕ ವಿಜಯಕ್ಕಾಗಿ ರಾಯಲ್ ಚಾಲೆಂಜರ್ಸ್ ಬೆಂಗಳೂರಿಗೆ ಅಭಿನಂದನೆ. ಕನಸು ಕೊನೆಗೂ ನನಸಾಗಿದೆ -- ಈ ಸಲಾ ಕಪ್ ನಮ್ದೆ. ಅಚಲವಾದ ಚೈತನ್ಯದಿಂದ, ಈ ಗೆಲುವು ಕರ್ನಾಟಕದ ಹೆಮ್ಮೆಯನ್ನು ಹೆಚ್ಚಿಸಿದೆ. ಪ್ರಪಂಚದಾದ್ಯಂತದ ಅಭಿಮಾನಿಗಳನ್ನು ರೋಮಾಂಚನಗೊಳಿಸಿದೆ ಎಂದು ಹೇಳಿದ್ದಾರೆ. ಐಪಿಎಲ್ ಪ್ರಶಸ್ತಿ ಗೆದ್ದ ಆರ್‌ಸಿಬಿ ತಂಡಕ್ಕೆ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ. ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ, ಆರ್‌ಸಿಬಿ ತಂಡ ಪಡೆದ ರೋಮಾಂಚಕ ಗೆಲುವಿಗೆ ಅಭಿನಂದನೆ ಸಲ್ಲಿಸಿದ್ದಾರೆ. ಲಕ್ಷಾಂತರ ಅಭಿಮಾನಿಗಳ ಕನಸುಗಳು ನನಸಾಗಿದೆ. ಇಡೀ ಆರ್‌ಸಿಬಿ ತಂಡಕ್ಕೆ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸುವುದಾಗಿ ಮಾಜಿ ಮುಖ್ಯಮಂತ್ರಿ ಮತ್ತು ಬಿಜೆಪಿ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

<><*<><>*><>

ರಾಷ್ಟ್ರಪತಿ ದ್ರೌಪದಿ ಮುರ್ಮು ನಿನ್ನೆ ಹೊಸದಾಗಿ ಸೇರ್ಪಡೆಗೊಂಡ ರಾಜ್ಯ ಆಡಳಿತ ಅಧಿಕಾರಿಗಳಿಗೆ, ಸರ್ಕಾರಿ ಯೋಜನೆಗಳು ಕೊನೆಯ ಮೈಲಿಗಲ್ಲನ್ನು ತಲುಪುವಂತೆ ಖಚಿತಪಡಿಸಿಕೊಳ್ಳಲು ಕೃತಕ ಬುದ್ಧಿಮತ್ತೆ, ಇ-ಆಡಳಿತ ಮತ್ತು ಡಿಜಿಟಲ್ ಪ್ರತಿಕ್ರಿಯೆ ಕಾರ್ಯವಿಧಾನಗಳಲ್ಲಿನ ನಾವೀನ್ಯತೆಗಳನ್ನು ಅಳವಡಿಸಿಕೊಳ್ಳುವಂತೆ ಕೇಳಿಕೊಂಡರು. ನವದೆಹಲಿಯ LBSNAA ನಲ್ಲಿ ನಡೆದ ೧೨೮ನೇ ಇಂಡಕ್ಷನ್ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿದ ರಾಜ್ಯ ನಾಗರಿಕ ಸೇವೆಗಳ ಅಧಿಕಾರಿಗಳನ್ನು ಉದ್ದೇಶಿಸಿ ರಾಷ್ಟ್ರಪತಿಗಳು ಮಾತನಾಡಿದರು.

<><*<><>*><>

ಸಿಕ್ಕಿಂನಲ್ಲಿ, ಲಾಚೆನ್ ಮತ್ತು ಚಾಟೆನ್ ನಲ್ಲಿ ಸ್ಥಳಾಂತರಿಸುವ ಪ್ರಕ್ರಿಯೆ ಇಂದು ಬೆಳಿಗ್ಗೆ ಪುನರಾರಂಭವಾಗಿದೆ. ಇಂದು ಇಂಡಿಯನ್ ಏರ್‌ಫೋರ್ಸ್ ಮತ್ತು ಎನ್‌ಡಿಆರ್‌ಎಫ್ ತಂಡಗಳು ೩೪ ಜನರನ್ನು ಸುರಕ್ಷಿತವಾಗಿ ರಕ್ಷಿಸಿವೆ. ಲಾಚೆನ್ ಮತ್ತು ಚಾಟೆನ್ ನಡುವೆ ಸೇನೆಯು ಒಂದು ಪ್ರಮುಖ ಪಾದಚಾರಿ ಮಾರ್ಗವನ್ನು ಸ್ಥಾಪಿಸಿದ್ದು, ಇಂದು ಚಾಟೆನ್ ಹೆಲಿಪ್ಯಾಡ್ ನಿಂದ ವಿಮಾನದ ಮೂಲಕ ರಕ್ಷಣಾ ಕಾರ್ಯಾಚರಣೆ ನಡೆಯಲಿದೆ. ಮಂಗನ್ ಜಿಲ್ಲಾಧಿಕಾರಿ ಅನಂತ್ ಜೈನ್ ಅವರು, ಲಾಚೆನ್ ನಲ್ಲಿ ಇನ್ನೂ ಸುಮಾರು ೧೩೦ ಪ್ರವಾಸಿಗರು ಸಿಲುಕಿಕೊಂಡಿದ್ದಾರೆ. ಅವರೆಲ್ಲರೂ ಸುರಕ್ಷಿತರಾಗಿದ್ದಾರೆ ಮತ್ತು ಅವರ ಹೋಟೆಲ್‌ಗಳಲ್ಲಿ ತಂಗಿದ್ದಾರೆ. ಲಾಚೆನ್‌ನಲ್ಲಿ ಮೊಬೈಲ್ ಸಂವಹನದಲ್ಲಿ ಅಡಚಣೆ ಉಂಟಾಗಿದೆ ಆದರೆ ಎನ್‌ಡಿಆರ್‌ಎಫ್‌ನ ಸ್ಯಾಟಲೈಟ್ ಫೋನ್ ಗಳ ಮೂಲಕ ಸಂವಹನ ನಡೆಯುತ್ತಿದೆ ಎಂದು ತಿಳಿಸಿದ್ದಾರೆ.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಇದೇ ೬ ರಂದು ಜಮ್ಮು ಮತ್ತು ಕಾಶ್ಮೀರದ ಚೇನಾಬ್ ಸೇತುವೆಯನ್ನು ಉದ್ಘಾಟಿಸಲಿದ್ದಾರೆ ಎಂದು ಕೇಂದ್ರ ಸಚಿವ ಡಾ.ಜಿತೇಂದ್ರ ಸಿಂಗ್ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಸಚಿವರು, ವಿಶ್ವದ ಅತಿ ಎತ್ತರದ ರೈಲ್ವೆ ಸೇತುವೆಯಾದ ಚೇನಾಬ್ ಸೇತುವೆಯು, ಜಮ್ಮು ಮತ್ತು ಕಾಶ್ಮೀರದಲ್ಲಿ ನವ ಭಾರತದ ಶಕ್ತಿ ಮತ್ತು ದೂರದೃಷ್ಟಿಯ ಸಂಕೇತವಾಗಿದೆ ಎಂದು ಹೇಳಿದ್ದಾರೆ. ಈ ಸೇತುವೆಯು ಉಧಂಪುರ-ಶ್ರೀನಗರ-ಬಾರಾಮುಲ್ಲಾ ರೈಲ್ವೆ ಸಂಪರ್ಕ ಯೋಜನೆಯ ಒಂದು ಭಾಗವಾಗಿದೆ. ಕಠಿಣ ನೈಸರ್ಗಿಕ ಸವಾಲುಗಳನ್ನು ತಡೆದುಕೊಳ್ಳುವಂತೆ ಈ ಸೇತುವೆಯನ್ನು ವಿನ್ಯಾಸಗೊಳಿಸಲಾಗಿದೆ ಎಂದು ಸಚಿವ ಡಾ.ಜಿತೇಂದ್ರ ಸಿಂಗ್ ತಿಳಿಸಿದ್ದಾರೆ.

<><*<><>*><>

ಭಯೋತ್ಪಾದನೆ ವಿರುದ್ಧದ ಹೋರಾಟಕ್ಕೆ ಬ್ರಿಟನ್ ಸರ್ಕಾರ ವ್ಯಕ್ತಪಡಿಸಿದ ಒಗ್ಗಟ್ಟು ಮತ್ತು ಬೆಂಬಲವನ್ನು ಭಾರತ ಶ್ಲಾಘಿಸಿದೆ. ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಅವರು ನಿನ್ನೆ ವಿದೇಶಾಂಗ, ಕಾಮನ್‌ವೆಲ್ತ್ ಮತ್ತು ಅಭಿವೃದ್ಧಿ ಕಚೇರಿಯಲ್ಲಿ ಖಾಯಂ ಅಧೀನ ಕಾರ್ಯದರ್ಶಿ ಆಲಿವರ್ ರಾಬಿನ್ಸ್ ಅವರೊಂದಿಗಿನ ಸಭೆಯಲ್ಲಿ ಮೆಚ್ಚುಗೆಯನ್ನು ವ್ಯಕ್ತಪಡಿಸಿದರು. ನವದೆಹಲಿಯಲ್ಲಿ ನಡೆದ ೧೭ ನೇ ಭಾರತ-ಬ್ರಿಟನ್ ವಿದೇಶಾಂಗ ಕಚೇರಿ ಸಮಾಲೋಚನೆಗಳು ಮತ್ತು ೧ ನೇ ಕಾರ್ಯತಂತ್ರದ ರಫ್ತು ಮತ್ತು ತಂತ್ರಜ್ಞಾನ ಸಹಕಾರ ಸಂವಾದದ ಸಂದರ್ಭದಲ್ಲಿ ನಡೆದ ಚರ್ಚೆಯಲ್ಲಿ ಅವರು ಪಾಲ್ಗೊಂಡಿದ್ದರು.

<><*<><>*><>

ವಿಶ್ವ ವಾಣಿಜ್ಯ ಸಂಸ್ಥೆಯ ಸಭೆಯಲ್ಲಿ ಪಾಲ್ಗೊಳ್ಳಲು ಪ್ಯಾರಿಸ್ ನಲ್ಲಿರುವ ಕೈಗಾರಿಕಾ ಮತ್ತು ವಾಣಿಜ್ಯ ಸಚಿವ ಪಿಯೂಷ್ ಗೋಯಲ್, ವಿವಿಧ ದೇಶಗಳ ಸಚಿವರೊಂದಿಗೆ ಮಾತುಕತೆ ನಡೆಸಿದರು. ಫ್ರಾನ್ಸ್ ಹಣಕಾಸು ಮತ್ತು ಕೈಗಾರಿಕಾ ಸಚಿವ ಎರಿಕ್ ಆರ್. ಲೊಂಬಾರ್ಡ್ ಅವರನ್ನು ಭೇಟಿಯಾದ ಪಿಯೂಷ್ ಗೋಯಲ್ ಅವರು, ಆರ್ಥಿಕ ಪಾಲುದಾರಿಕೆ ಹೆಚ್ಚಿಸುವ ಮತ್ತು ವ್ಯಾಪಾರ ವಹಿವಾಟು ಹಾಗೂ ಹೂಡಿಕೆ ವೃದ್ಧಿಸುವ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ಬಳಿಕ ನೈಜೀರಿಯಾ ವಾಣಿಜ್ಯ ಮತ್ತು ಕೈಗಾರಿಕಾ ಸಚಿವೆ ಜೊಡುವೋಲ್ ಅವರನ್ನು ಭೇಟಿ ಮಾಡಿದ ಪಿಯೂಷ್ ಗೋಯಲ್ ಅವರು, ದ್ವಿಪಕ್ಷೀಯ ವ್ಯಾಪಾರ ವೃದ್ಧಿ ಹಾಗೂ ಎರಡೂ ದೇಶಗಳ ನಡುವಿನ ಸಹಕಾರ ಬಲಪಡಿಸುವ ಕುರಿತು ಚರ್ಚಿಸಿದರು. ಅಲ್ಲದೆ, ವಿಶ್ವ ವಾಣಿಜ್ಯ ಸಂಸ್ಥೆಯ ಸುಧಾರಣೆಗಳ ಬಗ್ಗೆಯೂ ಸಮಾಲೋಚಿಸಿದರು. ಅಂತಾರಾಷ್ಟ್ರೀಯ ಇಂಧನ ಸಂಸ್ಥೆ ಕಾರ್ಯನಿರ್ವಾಹಕ ನಿರ್ದೇಶಕ ಡಾ. ಬಿರೋಲ್ ಹಾಗೂ ಸಿಂಗಪುರ ಉಪಪ್ರಧಾನಿ ಗಾನ್ ಕಿಮ್ ಯಾಂಗ್ ಅವರನ್ನು ಸಹ ಪಿಯೂಷ್ ಗೋಯಲ್ ಭೇಟಿ ಮಾಡಿ ಮಾತುಕತೆ ನಡೆಸಿದರು.

<><*<><>*><>

ಭಾರತೀಯ ಚುನಾವಣಾ ಆಯೋಗ ನೂತನ ತಂತ್ರಜ್ಞಾನ ಆಧಾರಿತ ವ್ಯವಸ್ಥೆಯನ್ನು ಪರಿಚಯಿಸುತ್ತಿದ್ದು, ಮತದಾನ ದಿನದ ವೇಳೆ ಅಂದಾಜು ಮತದಾನ ಶೇಕಡಾವಾರು ಪ್ರಮಾಣವನ್ನು ಜನತೆಗೆ ತ್ವರಿತವಾಗಿ ತಲುಪಿಸಲು ಸಿದ್ಧವಾಗಿದೆ. ಪ್ರತಿ ಎರಡು ಗಂಟೆಗೆ ಮತಗಟ್ಟೆ ಅಧಿಕಾರಿಗಳು ತಮ್ಮ ಮತಗಟ್ಟೆಗಳಲ್ಲಿ ಶೇಕಡಾವಾರು ಮತದಾನವನ್ನು ನೇರವಾಗಿ ಹೊಸ ಇಸಿಐ ನೆಟ್ ಆಪ್‌ನಲ್ಲಿ ನಮೂದಿಸುವ ವ್ಯವಸ್ಥೆ ಜಾರಿಗೆ ಬರುತ್ತಿದೆ. ಈ ಮಾಹಿತಿಯನ್ನು ಕ್ಷೇತ್ರ ಮಟ್ಟದಲ್ಲಿ ತಕ್ಷಣವೇ ಸಂಗ್ರಹಿಸಲಾಗುತ್ತದೆ. ಅಂದಾಜು ಶೇಕಡವಾರು ಮತದಾನದ ಮಾಹಿತಿಯನ್ನು ಹಿಂದಿನಂತೆ ಪ್ರತಿ ಎರಡು

ಗಂಟೆಗೊಮ್ಮೆ ಪ್ರಕಟಿಸಲಾಗುವುದು. ಈ ಮಾಹಿತಿ ನವೀಕೃತ ವೋಟರ್ ಟರ್ನೌಟ್ ಆಪ್ ಮೂಲಕ ಲಭ್ಯವಾಗಲಿದೆ.

**<><*<><>*><>**

ವಾರ್ಷಿಕ ಐದು ದಿನಗಳ ಹಜ್ ಯಾತ್ರೆ ಇಂದು ಆರಂಭವಾಗಲಿದ್ದು, ಭಾರತ ಸೇರಿದಂತೆ ಪ್ರಪಂಚದಾದ್ಯಂತದ ಲಕ್ಷಾಂತರ ಮುಸ್ಲಿಂ ಬಾಂಧವರು ಪವಿತ್ರ ನಗರವಾದ ಮೆಕ್ಕಾದಿಂದ ಸೌದಿ ಅರೇಬಿಯಾದ ಮಿನಾದಲ್ಲಿ ಸೇರಲು ತಮ್ಮ ಪ್ರಯಾಣವನ್ನು ಪ್ರಾರಂಭಿಸಿದ್ದಾರೆ. ಇಂದು ಮುಂಜಾನೆ ಅರಾಫತ್ ಕಡೆಗೆ ಹಜ್ ಪತಣ ಪ್ರಾರ್ಥನೆಯ ದಿನದ ಪ್ರಮುಖ ಆಚರಣೆಗಾಗಿ ತೆರುಳುತಿದ್ದಾರೆ. ಯಾತ್ರಿಕರು ಅಲ್ಲಿ ಪ್ರಾರ್ಥನೆ ಸಲ್ಲಿಸಲಿದ್ದಾರೆ.

**<><*<><>*><>**

ಭಯೋತ್ಪಾದನೆಯ ವಿರುದ್ಧ ಜಾಗತಿಕ ಮಟ್ಟದಲ್ಲಿ ಅರಿವು ಮೂಡಿಸಲು ತೆರಳಿರುವ ಏಳು ಸರ್ವಪಕ್ಷದ ನಿಯೋಗಗಳಲ್ಲಿ ಎರಡು ನಿಯೋಗಗಳು ತಮ್ಮ ಯಶಸ್ವಿ ಭೇಟಿಯನ್ನು ಮುಗಿಸಿ ಭಾರತಕ್ಕೆ ಮರಳಿವೆ. ಭೇಟಿಯ ಸಮಯದಲ್ಲಿ, ನಿಯೋಗಗಳು ವಿದೇಶಿ ನಾಯಕರು, ಹಿರಿಯ ಅಧಿಕಾರಿಗಳು, ಪ್ರಭಾವಿ ಚಿಂತಕರ ಚಾವಡಿಗಳು, ಮಾಧ್ಯಮಗಳು ಮತ್ತು ಭಾರತೀಯ ವಲಸೆಗಾರರೊಂದಿಗೆ ತಮ್ಮ ಅಂತರರಾಷ್ಟ್ರೀಯ ಸಂಪರ್ಕದ ಭಾಗವಾಗಿ ತೊಡಗಿಸಿಕೊಂಡವು. ಡಿಎಂಕೆ ಸಂಸದೆ ಕನಿಮೋಳಿ ನೇತೃತ್ವದ ನಿಯೋಗವು ಸ್ಪೇನ್, ಗ್ರೀಸ್, ಸ್ಲೊವೇನಿಯಾ, ಲಾಟ್ವಿಯಾ ಮತ್ತು ರಷ್ಯಾಕ್ಕೆ ಐದು ರಾಷ್ಟ್ರಗಳ ಭೇಟಿಯನ್ನು ಮುಗಿಸಿದ ನಂತರ ಭಾರತಕ್ಕೆ ಮರಳಿದೆ. ಬಿಜೆಪಿ ಸಂಸದ ಬೈಜಯಂತ್ ಪಾಂಡ ನೇತೃತ್ವದ ಮತ್ತೊಂದು ಸರ್ವಪಕ್ಷ ನಿಯೋಗವು ವಿವಿಧ ದೇಶಗಳಿಗೆ ತಮ್ಮ ಯಶಸ್ವಿ ಭೇಟಿಯನ್ನು ಮುಗಿಸಿದ ನಂತರ ಇಂದು ಭಾರತಕ್ಕೆ ಹಿಂದುರಿಗಿದೆ. ನವದೆಹಲಿಗೆ ಹಿಂದಿರುಗಿದ ನಂತರ ನಿಯೋಗವು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರನ್ನು ಭೇಟಿಯಾಯಿತು.

**<><*<><>*><>**

ಭಯೋತ್ಪಾದನೆಯನ್ನು ನಿಭಾಯಿಸುವ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಸಮಿತಿಗಳ ನಾಯಕತ್ವದ ಕುರಿತಾದ ಗೊಂದಲವನ್ನು ಕೊನೆಗೊಳಿಸಿ, ಅಲ್ಜೀರಿಯಾವನ್ನು ಪಾಕಿಸ್ತಾನ ಮೂಲದ ಭಯೋತ್ಪಾದಕ ಗುಂಪುಗಳಾದ ಲಷ್ಕರ್-ಎ-ತೋಯ್ಬಾ ಮತ್ತು ಜೈಶ್-ಎ-ಮೊಹಮ್ಮದ್ ನೊಂದಿಗೆ ವ್ಯವಹರಿಸುತ್ತಿರುವ ೧ ಸಾವಿರದ ೨೬೭ ನಿರ್ಬಂಧಗಳ ಸಮಿತಿಯ ಅಧ್ಯಕ್ಷರನ್ನಾಗಿ ನೇಮಿಸಲಾಗಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**